9. ವರದಿಯನ್ನೊಪ್ಪಿಸುವುದು

ಶ್ರೀ ಕೆ.ಜಿ. ಕುಮಾರ ಸ್ವಾಮಿ (ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಅಧ್ಯಕ್ಷರ ಪರವಾಗಿ):– ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ ಸದಸ್ಯನಾದ ನಾನು 13ನೇ ವಿಧಾನಸಭೆಯ 2009–10ನೇ ಸಾಲಿನ ಸಮಿತಿಯ ಮೊದಲನೇ ವರದಿಯನ್ನು ಸದನದ ಮುಂದೆ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು:– ಒಪ್ಪಸಲಾಯಿತು.

10. ಚುನಾವಣಾ ಪ್ರಸ್ತಾವ

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಳಿ ಸಚಿವರು):– ಮಾನ್ಯ ಅಧ್ಯಕ್ಷರೆ, :

ಅ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 265(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಆ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 268(1)ನೇ ನಿಯಮದ ಅನುಸಾರವಾಗಿ ಈ ಸಭೆ **ಅಂದಾಜುಗಳ ಸಮಿತಿಗೆ ಹದಿನೆಂಟು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಇ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 271(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಈ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 272(1)ನೇ ನಿಯಮದ ಅನುಸಾರವಾಗಿ ಈ ಸಭೆ **ಹಕ್ಕುಬಾಧ್ಯತೆಗಳ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಊ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 277(1)ನೇ ನಿಯಮದ ಅನುಸಾರವಾಗಿ ಈ ಸಭೆ **ಅಧೀನ ಶಾಸನ ರಚನಾ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಋ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 281(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸರ್ಕಾರಿ ಭರವಸೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ೠ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 283(1)ನೇ ನಿಯಮದ ಅನುಸಾರವಾಗಿ ಈ ಸಭೆ **ಖಾಸಗಿ ಸದಸ್ಯರ ವಿಧೇಯಕಗಳು ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ೡ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 286ನೇ ನಿಯಮದ ಅನುಸಾರವಾಗಿ ಈ ಸಭೆ **ಅನುಸೂಚಿತ ಜಾಗಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಎ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 288ನೇ ನಿಯಮದ ಅನುಸಾರವಾಗಿ ಈ ಸಭೆ **ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಏ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 370(2)ನೇ ನಿಯಮದ ಅನುಸಾರವಾಗಿ ಈ ಸಭೆ **ಸದನದ ಸಮಿತಿ (ವಸತಿ ಸೌಕರ್ಯಗಳ ಸಮಿತಿ) ಗೆ ಹನ್ನೆರಡು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು:– ಮಂಡಿಸಲಾಯಿತು, ಈಗ ಸದನವನ್ನು ಬುಧವಾರ ಬೆಳಿಗ್ಗೆ 11.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಸಂಜೆ 5 ಗಂಟೆ 49 ನಿಮಿಷಕ್ಕೆ ಮುಂದೂಡಲ್ಪಟ್ಟು ದಿನಾಂಕ 7ನೇ ಡಿಸೆಂಬರ್ 2011 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ಪುನಃ ಸಮಾವೇಶಗೊಳ್ಳಲು ನಿಶ್ಚಯಿಸಿತು.)